ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 78 ಬಿಎಂಆರ್ 2017

ಕರ್ನಾಟಕ ಸರ್ಕಾರ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ:23-10-2017.

## ಅಧಿಸೂಚನೆ

ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಕಾಯ್ದೆ 1985ರ ಕಲಂ 2(ಸಿ)ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಮತ್ತು ರಾಮನಗರ ಜಿಲ್ಲೆಗಳನ್ನೊಳಗೊಂಡ ಪ್ರದೇಶವನ್ನು 'ಬೆಂಗಳೂರು ಮಹಾನಗರ ಪ್ರದೇಶ' ಎಂದು ಘೋಷಿಸಲಾಗಿದೆ. ಬೆಂಗಳೂರು ಮಹಾನಗರ ಪ್ರದೇಶದ ಎಲ್ಲೆಯ ವಿವರಗಳನ್ನು ಅನುಬಂಧ-I ರಲ್ಲಿ ನಮೂದಿಸಲಾಗಿದೆ.

1330
28-10-2017

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಎಸ್. ಜಗದೀಶರೆಡ್ಡಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

31/10/2017

ಇವರಿಗೆ:

ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಈ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ವಿಶೇಷ ಪತ್ರದಲ್ಲಿ ಪ್ರಕಟಿಸಿ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರಿಗೆ 50 ಪ್ರತಿಗಳನ್ನು ಹಾಗೂ ನಗರಾಭಿವೃದ್ಧಿ ಇಲಾಖೆ, ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು-1 ಶಾಖೆಗೆ 50 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

7-11-2017

ಪ್ರತಿ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ:

1) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
2) ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ/ಗ್ರಾಮಾಂತರ ಜಿಲ್ಲೆ, ಬೆಂಗಳೂರು.
3) ಜಿಲ್ಲಾಧಿಕಾರಿಗಳು, ರಾಮನಗರ ಜಿಲ್ಲೆ, ರಾಮನಗರ.
4) ಸಂಬಂಧಪಟ್ಟ ನಗರಾಭಿವೃದ್ಧಿ ಪ್ರಾಧಿಕಾರ/ಯೋಜನಾ ಪ್ರಾಧಿಕಾರಗಳಿಗೆ.
5) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

## ಅನುಬಂಧ-I

ಬೆಂಗಳೂರು ಮಹಾನಗರ ಪ್ರದೇಶದ ಎಲ್ಲೆಯ ವಿವರ:

ಬೆಂಗಳೂರು ಮಹಾನಗರ ಪ್ರದೇಶದ ಸರಹದ್ದು ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳು ಸಂಧಿಸುವ ರಾಷ್ಟ್ರೀಯ ಹೆದ್ದಾರಿ-7 ರಿಂದ (ಚಿಕ್ಕಬಳ್ಳಾಪುರ ರಸ್ತೆ) ಪ್ರಾರಂಭವಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಉತ್ತರದ ಗಡಿಗುಂಟ ಪೂರ್ವಾಭಿಮುಖವಾಗಿ ಚಲಿಸಿ, ಇದೇ ಜಿಲ್ಲೆಯ ಈಶಾನ್ಯ ದಿಕ್ಕಿನಲ್ಲಿ ದಕ್ಷಿಣಕ್ಕೆ ತಿರುಗಿ ಪೂರ್ವದ ಗಡಿಗುಂಟ ದಕ್ಷಿಣಾಭಿಮುಖವಾಗಿ ಚಲಿಸಿ, ರಾಷ್ಟ್ರೀಯ ಹೆದ್ದಾರಿ-4ನ್ನು (ಕೋಲಾರ ರಸ್ತೆ) ದಾಟಿಕೊಂಡು, ಬೆಂಗಳೂರು ನಗರ ಜಿಲ್ಲೆಯ ಗಡಿಯನ್ನು ತಲುಪಿ, ನಗರ ಜಿಲ್ಲೆಯ ಪೂರ್ವದ ಗಡಿಗುಂಟ ದಕ್ಷಿಣಾಭಿಮುಖವಾಗಿ ಚಲಿಸಿ ರಾಷ್ಟ್ರೀಯ ಹೆದ್ದಾರಿ-4 (ಹೊಸೂರು ರಸ್ತೆ) ಅನ್ನು ದಾಟಿಕೊಂಡು, ಆಗ್ನೇಯ ಮೂಲೆಯಿಂದ ದಕ್ಷಿಣದ ಗಡಿಗುಂಟ ಪಶ್ಚಿಮಾಭಿಮುಖವಾಗಿ ಚಲಿಸಿ, ರಾಮನಗರ ಜಿಲ್ಲೆಯ ಗಡಿ ತಲುಪಿ ಇದೇ ಜಿಲ್ಲೆಯ ಪೂರ್ವದ ಗಡಿಗುಂಟ ದಕ್ಷಿಣಾಭಿಮುಖವಾಗಿ ಚಲಿಸಿ, ಆಗ್ನೇಯ ಮೂಲೆಯಿಂದ ದಕ್ಷಿಣದ ಗಡಿಗುಂಟ ಪಶ್ಚಿಮಾಭಿಮುಖವಾಗಿ ಚಲಿಸಿ ರಾಷ್ಟ್ರೀಯ ಹೆದ್ದಾರಿ-209 (ಚಾಮರಾಜನಗರ ರಸ್ತೆ) ಅನ್ನು ದಾಟಿಕೊಂಡು ನೈರುತ್ಯ ಮೂಲೆಯಿಂದ ಪಶ್ಚಿಮದ ಗಡಿಗುಂಟ ಉತ್ತರಾಭಿಮುಖವಾಗಿ ಚಲಿಸಿ, ರಾಷ್ಟ್ರೀಯ ಹೆದ್ದಾರಿ-207 (ಬೆಂಗಳೂರು-ಮೈಸೂರು ರಸ್ತೆ) ಮತ್ತು ರಾಷ್ಟ್ರೀಯ ಹೆದ್ದಾರಿ-48 (ಬೆಂಗಳೂರು-ಮಂಗಳೂರು ರಸ್ತೆ) ಗಳನ್ನು ದಾಟಿಕೊಂಡು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಗಡಿ ತಲುಪಿ, ಪಶ್ಚಿಮದ ಗಡಿಗುಂಟ ಉತ್ತರಾಭಿಮುಖವಾಗಿ ಚಲಿಸಿ, ರಾಷ್ಟ್ರೀಯ ಹೆದ್ದಾರಿ-4 (ತುಮಕೂರು ರಸ್ತೆ) ಅನ್ನು ದಾಟಿಕೊಂಡು, ವಾಯುವ್ಯ ಮೂಲೆ ತಲುಪಿ ಜಿಲ್ಲೆಯ ಉತ್ತರದ ಗಡಿಯಲ್ಲಿ ಪೂರ್ವಾಭಿಮುಖವಾಗಿ ಚಲಿಸಿ ಬೆಂಗಳೂರು ಗ್ರಾಮಾಂತರ ಜಿಲ್ಲೆ & ಚಿಕ್ಕಬಳ್ಳಾಪುರ ಜಿಲ್ಲೆ ಸಂಧಿಸುವ ರಾಷ್ಟ್ರೀಯ ಹೆದ್ದಾರಿ-7ರಲ್ಲಿ ಅಂತ್ಯಗೊಳ್ಳುತ್ತದೆ.

(ಕೆ.ಎಸ್. ಜಗದೀಶರೆಡ್ಡಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.